ಇ) ರಾಯಭಾಗ್ ತಾಲ್ಲೂಕಿನ ರಾಯಭಾಗ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿನ 12 ಪೊಲೀಸ್ ವಸತಿಗೃಹಗಳನ್ನು ನಿರ್ಮಿಸಲು ಟೆಂಡರ್ ಕರೆಯಲಾಗಿದ್ದು, ಪ್ರಕ್ರಿಯೆ ಚಾಲನೆಯಲ್ಲಿದ್ದು, ಟೆಂಡರ್ ಪ್ರಕ್ರಿಯೆ ಅಂತಿಮಗೊಂಡ ನಂತರ ವಸತಿಗೃಹಗಳ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭ ಮಾಡಲಾಗುವುದು.

ಕಾಮಗಾರಿಗಳು

1144(2308); ಶ್ರೀ ಅಖಂಡ ಶ್ರೀನಿವಾಸಮೂರ್ತಿ ಆರ್. (ಪುಲಿಕೇಶಿನಗರ)

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2013–14 ಹಾಗೂ 2014–15ನೇ ಸಾಲಿನ ಕಾಮಗಾರಿಗಳನ್ನು ಸ್ಥಗಿತಗೊಳಿಸಲಾಗಿರುವುದೇ? ಹಾಗಿದ್ದಲ್ಲಿ ಕಾರಣಗಳೇನು? (ವಿವರ ನೀಡುವುದು)

ಆ) ಸ್ಥಗಿತಗೊಳಿಸಿರುವ ಕಾಮಗಾರಿಗಳನ್ನು ಪುನಃ ಪ್ರಾರಂಭಿಸಲಾಗುವುದೇ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು)

ಅ) ಹೌದು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾಮಗಾರಿಗಳ ಶಾಖೆಗಳಲ್ಲಿ ಯಾವುದೇ ಕಾಮಗಾರಿ ಮಂಜೂರಾಗಿದ್ದೂ ಪ್ರಾರಂಭವಾಗದೆಯಿದ್ದಲ್ಲಿ ಮತ್ತು ವ್ಯವಸ್ಥೆಯನ್ನು ನಿಯಂತ್ರಿಸಲು ಅಂತಹ ಕಾಮಗಾರಿಗಳನ್ನು ಮಾತ್ರ ಸ್ಥಗಿತಗೊಳಿಸಲಾಗಿರುತ್ತದೆ.

ಆ) ಪಾಲಿಕೆಯ ವ್ಯಾಪ್ತಿಯಲ್ಲಿ 13ನೇ ಹಣಕಾಸು, ರಾಜ್ಯ ಸರ್ಕಾರದ ಅನುದಾನ, ನರ್ಮ್ ಅನುದಾನ ಮತ್ತು ಪಾಲಿಕೆ ಅನುದಾನದಲ್ಲಿ ರಸ್ತೆ ಗುಂಡಿಗಳ ಹಾಗೂ ನಿರ್ವಹಣೆಯ ಯೋಜನೆಗಳಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ಪುನಃ ಪ್ರಾರಂಭಿಸಲಾಗಿರುತ್ತದೆ.